ಮಹಿಳೆಯರಿಗಿಂತಲೂ ಹೆಚ್ಚು ಹಾನಿ ಮಾಡುವ ಒಂದು ಪರೀಕ್ಷೆಯನ್ನು ನಾನು ನನ್ನ ನಂತರ ಪುರುಷರಿಗೆ ಬಿಟ್ಟು ಹೋಗುವುದಿಲ್ಲ

ಉಸಾಮ ಬಿನ್ ಝೈದ್ (ಅಲ್ಲಾಹು ಅವರಿಬ್ಬರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಪ್ರವಾದಿಯವರು
(ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಮಹಿಳೆಯರಿಗಿಂತಲೂ ಹೆಚ್ಚು ಹಾನಿ ಮಾಡುವ ಒಂದು ಪರೀಕ್ಷೆಯನ್ನು ನಾನು ನನ್ನ ನಂತರ ಪುರುಷರಿಗೆ ಬಿಟ್ಟು ಹೋಗುವುದಿಲ್ಲ."
[صحيح] [متفق عليه]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿ ಇರಲಿ) ಇಲ್ಲಿ ತಿಳಿಸುವುದೇನೆಂದರೆ, ಅವರು ಅವರ ಮರಣಾನಂತರ ಮಹಿಳೆಯರಿಗಿಂತಲೂ ಹೆಚ್ಚು ಹಾನಿ ಮಾಡುವ ಒಂದು ಪರೀಕ್ಷೆಯನ್ನು ಒಬ್ಬ ಪುರುಷನಿಗೆ ಬಿಟ್ಟು ಹೋಗುವುದಿಲ್ಲ. ಆ ಮಹಿಳೆ ಅವನ ಹೆಂಡತಿಯಾಗಿದ್ದರೆ ಧರ್ಮಕ್ಕೆ ವಿರುದ್ಧವಾದ ರೀತಿಯಲ್ಲಿ ಅವಳನ್ನು ಅನುಸರಿಸುವ ಮೂಲಕ ಅವನು ಈ ಪರೀಕ್ಷೆಯನ್ನು ಎದುರಿಸುತ್ತಾನೆ. ಆಕೆ ಅನ್ಯ ಮಹಿಳೆಯಾಗಿದ್ದರೆ ಅವಳೊಂದಿಗೆ ಬೆರೆಯುವ, ಅಥವಾ ಅವಳೊಂದಿಗೆ ಏಕಾಂತದಲ್ಲಿರುವಾಗ ಮತ್ತು ಅದರಿಂದ ಉಂಟಾಗುವ ಕೆಟ್ಟ ಸಂಗತಿಗಳ ಮೂಲಕ ಅವನು ಈ ಪರೀಕ್ಷೆಯನ್ನು ಎದುರಿಸುತ್ತಾನೆ.

https://sunnah.global/hadeeth/kn/show/5830